# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಸರ್ಕಾರದ ಎಂಎಸ್‌ಇ-ಸಿಡಿಪಿ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:
1. ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನ ಸಂ: 1(17)/ ಎಸ್‌ಐಸಿಡಿಪಿ/ಕ್ಲಸ್ಟರ್/ಟಿಎಂ/2016 ದಿ: 10.02.2010
2. ಸರ್ಕಾರಿ ಆದೇಶ ಸಂ: ಸಿಐ 82 ಸಪ್ರಕೈ 2011, ದಿ: 13.04.2011.
3. ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನ ಸಂ: 1(634)/CDD/Guidelines Modification/2016 D: 27.07.2016.
4. ವ್ಯವಸ್ಥಾಪಕ ನಿರ್ದೇಶಕರು, ಕೆಸಿಟಿಯು ಇವರ ಪತ್ರ ಸಂ: ಕೆಸಿಟಿಯು/ ಎಂಎಸ್‌ಇ-ಸಿಡಿಪಿ/2016-17 ದಿ: 11.08.2016.

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂ: (1)ರಲ್ಲಿ ಕೇಂದ್ರ ಸರ್ಕಾರ ಎಂಎಸ್‌ಇ-ಸಿಡಿಪಿ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸುವ ಕುರಿತು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಅದರಂತೆ, ಮೇಲೆ ಓದಲಾದ ಕ್ರಮ ಸಂ: (2)ರಲ್ಲಿ ರಾಜ್ಯ ಮಟ್ಟದ ಸ್ಟೀರಿಂಗ್ ಕಮಿಟಿಯನ್ನು ರಚಿಸಲಾಗಿದೆ. ನಂತರ, ಕೇಂದ್ರ ಸರ್ಕಾರವು ಎಂಎಸ್‌ಇ-ಸಿಡಿಪಿ ಯೋಜನೆಯ ಪರಿಷ್ಕೃತ ಮಾರ್ಗಸೂಚಿಗಳಿಗೆ ಸಂಬಂಧಿಸಿದಂತೆ ಕೆಲವು ಮಾರ್ಪಾಡುಗಳನ್ನು ಮಾಡಿ ಪ್ರಾಜೆಕ್ಟ್ ಸ್ಟೀರಿಂಗ್ ಕಮಿಟಿ ರಚಿಸುವ ಕುರಿತು ಮೇಲೆ ಓದಲಾದ ಕ್ರಮ ಸಂ: (3)ರಲ್ಲಿ ನಿರ್ದೇಶನವನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂ: (4)ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆಸಿಟಿಯು, ಬೆಂಗಳೂರು ಇವರು ಕೇಂದ್ರ ಸರ್ಕಾರದ ಎಂಎಸ್‌ಎಂಇ ಮಂತ್ರಾಲಯವು ಮಾರ್ಪಾಡು ಮಾಡಿರುವ ಮಾರ್ಗಸೂಚಿಗಳನ್ವಯ ಪ್ರಾಜೆಕ್ ಸ್ಟೀರಿಂಗ್ ಕಮಿಟಿ ರಚಿಸಿ ರಾಜ್ಯದಲ್ಲಿ ಎಂಎಸ್‌ಸಿ-ಸಿಡಿಪಿ ಯೋಜನೆಯನ್ನು ಅನುಷ್ಠಾನಗೊಳಿಸಲು ನಿರ್ದೇಶನ ನೀಡುವಂತೆ ಕೋರಿ, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

COUNCIL FOR TECHNOLOGICAL UPGR...
M.D.
SEP 2016

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂ: ಸಿಐ 72 ಸಪ್ರಕೈ 2016 ದಿನಾಂಕ: 06.09.2016**

ಭಾರತ ಸರ್ಕಾರದ ಎಂಎಸ್‌ಸಿ-ಸಿಡಿಪಿ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಪ್ರಾಜೆಟ್ ಸ್ಟೀರಿಂಗ್ ಕಮಿಟಿಯನ್ನು ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಎಂಎಸ್‌ಎಂಇ), ಕರ್ನಾಟಕ ಸರ್ಕಾರ | ಅಧ್ಯಕ್ಷರು |
| 2 | ವ್ಯವಸ್ಥಾಪಕ ನಿರ್ದೇಶಕರು, ಕೆಸಿಟಿಯು (ಅನುಷ್ಠಾನ ಸಂಸ್ಥೆ) | ಸದಸ್ಯ ಕಾರ್ಯದರ್ಶಿ/ ಕನ್ವೆನರ್ |
| 3 | ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ) (ಒಂದು ಪಕ್ಷ ಇವರು ಬೇರೆ ಕೆಲಸದ ನಿಮಿತ್ತ ಸಭೆಗೆ ಹಾಜರಾಗದಿದ್ದಲ್ಲಿ ಅವರ ಪ್ರತಿನಿಧಿಯಾಗಿ ಈ ವಿಷಯವನ್ನು ಅರಿತ ಅಧೀನ ಕಾರ್ಯದರ್ಶಿ ಅಥವಾ ಅವರಿಗಿಂತ ಮೇಲ್ಪಟ್ಟ ಅಧಿಕಾರಿಗಳು ಭಾಗವಹಿಸುವುದು). | ಸದಸ್ಯರು |
| 4 | ನಿರ್ದೇಶಕರು, ಎಂಎಸ್‌ಎಂಇ – ಅಭಿವೃದ್ಧಿ ಸಂಸ್ಥೆ | ಸದಸ್ಯರು |
| 5 | ಜಂಟಿ ನಿರ್ದೇಶಕರು, ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಕೈಗಾರಿಕಾ ಕೇಂದ್ರ (ಡಿಐಸಿ). | ಸದಸ್ಯರು |
| 6 | ಕೈಗಾರಿಕಾಭಿವೃದ್ಧಿ ಆಯುಕ್ತರು (ಒಂದು ಪಕ್ಷ ಇವರು ಬೇರೆ ಕೆಲಸದ ನಿಮಿತ್ತ ಸಭೆಗೆ ಹಾಜರಾಗದಿದ್ದಲ್ಲಿ ಅವರ ಪ್ರತಿನಿಧಿಯಾಗಿ ಈ ವಿಷಯವನ್ನು ಅರಿತ ಜಂಟಿ ನಿರ್ದೇಶಕರು ಅಥವಾ ಅವರಿಗಿಂತ ಮೇಲ್ಪಟ್ಟ ಅಧಿಕಾರಿಗಳು ಭಾಗವಹಿಸುವುದು). | ಸದಸ್ಯರು |

ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನ ಸಂ: 1(634)/CDD/ Guidelines Modification/2016 D: 27.07.2016ರಲ್ಲಿರುವ ಅಂಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

*ಅನುಷ್ಠಾನ ಸಂಸ್ಥೆಯು ಪ್ರತಿ ತಿಂಗಳು ಪ್ರತಿಯೊಂದು ಕ್ಲಸ್ಟರಿನ ಛಾಯಚಿತ್ರಗಳೊಂದಿಗೆ ಮಾಹಿತಿಗಳನ್ನು ಇ-ಸಮೀಕ್ಷಾ ಪೋರ್ಟಲ್‌ನಲ್ಲಿ ವಿವರಗಳನ್ನು ಅಳವಡಿಸಲು ಸಂಬಂಧಪಟ್ಟ ಎಂಎಸ್‌ಎಂಇ-ಡಿಐ ರವರಿಗೆ ಒದಗಿಸುವುದು.*

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Nagaraja
[ಎಸ್. ನಾಗರಾಜ] 06/09/2016
ಪೀಠಾಧಿಕಾರಿ [ಸಪ್ರಕೈ],
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.

2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
5. ನಿರ್ದೇಶಕರು, (ಎಂಎಸ್ಎಂಇ-ಡಿಐ), ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು.
6. ನಿರ್ದೇಶಕರು, (ಎಂಎಸ್ಎಂಇ-ಡಿಐ), ಕೈಗಾರಿಕಾ ವಸಾಹತು, ಗೋಕುಲ ರಸ್ತೆ, ಹುಬ್ಬಳ್ಳಿ, ಧಾರವಾಡ ಜಿಲ್ಲೆ-580030
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್ತು, 4ನೇ ಮಹಡಿ, ಬಸವ ಭವನ, ಶ್ರೀ ಬಸವೇಶ್ವರ ವೃತ್ತ, ಬೆಂಗಳೂರು-01.

ಪ್ರತಿಯನ್ನು:

1. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಉಪ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1.
2. ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಗೆ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.